108

**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ವ್ಹಿ. ಸಂಕನೂರ ಇವರ ನಿಯಮ 72ರಡಿ ಗಮನ ಸೆಳೆಯುವ ಸೂಚನೆಗೆ ಉನ್ನತ ಶಿಕ್ಷಣ ಸಚಿವರ ಉತ್ತರ.**

**ವಿಷಯ:**

ರಾಜ್ಯ ಸರ್ಕಾರದ ಸಿವಿಲ್ ಸೇವೆಗಳಿಗೆ 01.04.2006ರ ಪೂರ್ವದಲ್ಲಿ ಉದ್ಯೋಗಕ್ಕಾಗಿ ಅರ್ಜಿ ಸಲ್ಲಿಸಿ, ನಂತರದ ದಿನಗಳಲ್ಲಿ ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡು, ತದನಂತರ ಅಂದರೆ 01.04.2006ರ ನಂತರ ಕೆಲಸಕ್ಕೆ ಹಾಜರಾದ ಎಲ್ಲಾ ಸಿಬ್ಬಂದಿಗೆ ಹಳೆ ಪಿಂಚಣಿ ಯೋಜನೆ ಜಾರಿಗೊಳಿಸಲಾಗಿದೆ. ಆದರೆ, ಈ ಸೌಲಭ್ಯವನ್ನು ರಾಜ್ಯದ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳ ಪ್ರಾಧ್ಯಾಪಕ ಹಾಗೂ ಶಿಕ್ಷಕೇತರ ಹಾಗೂ ಖಾಸಗಿ ಅನುದಾನಿತ ಸಿಬ್ಬಂದಿಗಳಿಗೆ ವಿಸ್ತರಿಸದೇ ಅನ್ಯಾಯಕ್ಕೆ ಒಳಗಾಗಿರುವುದನ್ನು ಸರಿಪಡಿಸಲು ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

**ಉತ್ತರ:**

ಸರ್ಕಾರದ ಆದೇಶ ಸಂಖ್ಯೆ: ಆಇ-ಪಿಇಎನ್/99/2023, ದಿನಾಂಕ: 24.01.2024ರ ಆದೇಶದನ್ವಯ ದಿನಾಂಕ:01.04.2006ರ ಪೂರ್ವದಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಖಾಲಿ ಹುದ್ದೆಗಳ ಭರ್ತಿಗಾಗಿ ಹೊರಡಿಸಿದ ನೇಮಕಾತಿ ಅಧಿಸೂಚನೆಗಳ ಮೇರೆಗೆ ಆಯ್ಕೆ ಹೊಂದಿ ದಿನಾಂಕ: 01.04.2006 ರಂದು ಅಥವಾ ಆ ದಿನಾಂಕದ ನಂತರ ಸೇವೆಗೆ ಸೇರಿರುವ ಕಾರಣದಿಂದ ನೂತನ ಅಂಶದಾಯಿ ಕೊಡುಗೆ ಯೋಜನೆಯ (ರಾಷ್ಟ್ರೀಯ ಪಿಂಚಣಿ ಯೋಜನೆ) ವ್ಯಾಪ್ತಿಗೊಳಪಟ್ಟಿರುವ ಸರ್ಕಾರಿ ನೌಕರರನ್ನು ಸರ್ಕಾರವು ಅವರ ಅಭಿಮತದ ಮೇರೆಗೆ ಕೆಲವು ಷರತ್ತುಗಳಿಗೊಳಪಟ್ಟು ಒಂದು ಬಾರಿಯ ಕ್ರಮವಾಗಿ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೊಳಪಡಿಸಲು ಒಪ್ಪಿಗೆ ನೀಡಿದೆ.

ದಿನಾಂಕ:24.01.2024ರ ಆದೇಶವು ಕೇವಲ ರಾಜ್ಯ ಸಿವಿಲ್ ಸೇವೆಯಲ್ಲಿನ ಹುದ್ದೆಗಳಿಗೆ ಅನ್ವಯವಾಗುತ್ತದೆ. ನಿಗಮ/ ಮಂಡಳಿ/ವಿಶ್ವವಿದ್ಯಾಲಯಗಳು/ ಇತರೇ ಸ್ವಾಯತ್ತ ಸಂಸ್ಥೆಗಳಲ್ಲಿ ನೇಮಕಗೊಂಡ ಸಿಬ್ಬಂದಿಗಳು ರಾಜ್ಯ ಸಿವಿಲ್ ಸೇವೆಗಳ ವ್ಯಾಪ್ತಿಗೆ ಬರುವುದಿಲ್ಲ. ಆದ್ದರಿಂದ ನಿಗಮ/ ಮಂಡಳಿ/ವಿಶ್ವವಿದ್ಯಾಲಯಗಳು/ ಇತರೇ ಸ್ವಾಯತ್ತ ಸಂಸ್ಥೆಗಳಿಂದ ಬರುವ ಪ್ರಸ್ತಾವನೆಗಳನ್ನು ಪರಿಗಣಿಸಲು ಅವಕಾಶವಿರುವುದಿಲ್ಲವೆಂದು ಆರ್ಥಿಕ ಇಲಾಖೆಯು ಎಲ್ಲಾ ಇಲಾಖೆಯ ಮುಖ್ಯಸ್ಥರಿಗೆ ಬರೆದ ದಿನಾಂಕ:07.10.2024ರ ಅರೆ ಸರ್ಕಾರಿ ಪತ್ರದಲ್ಲಿ ತಿಳಿಸಿರುತ್ತದೆ.

ಅನುದಾನಿತ ಸಿಬ್ಬಂದಿಗಳ ಸೇವಾ ಸೌಲಭ್ಯಗಳು ಅನುದಾನ ಸಹಿತವಾಗಿ ಅನುಮೋದನೆಗೊಂಡ ದಿನಾಂಕದಿಂದ ಅನ್ವಯವಾಗುತ್ತದೆ. ಆದುದರಿಂದ, 2006ರ ಪೂರ್ವದಲ್ಲಿ ಅನುದಾನ ರಹಿತವಾಗಿ ನೇಮಕಗೊಂಡ ಸಿಬ್ಬಂದಿಗಳು ದಿನಾಂಕ: 01.04.2006ರ ನಂತರ ಅನುದಾನಕ್ಕೆ ಒಳಪಟ್ಟಲ್ಲಿ ಅಂತಹ ಸಿಬ್ಬಂದಿಗಳು ಹೊಸ ಪಿಂಚಣಿ ಯೋಜನೆ (NPS) ವ್ಯಾಪ್ತಿಗೆ ಒಳಪಡುತ್ತಾರೆ. ಈ ಪಿಂಚಣಿ ಯೋಜನೆಯು ಸಂಪೂರ್ಣವಾಗಿ ಸ್ವ-ಇಚ್ಛಾ ನೆಲೆಯಲ್ಲಿ ಪಿಂಚಣಿ (Optional) ಜಾರಿಗೊಳಿಸುವುದರಿಂದ, ಕಡ್ಡಾಯಗೊಳಿಸಲು ಅವಕಾಶವಿರುವುದಿಲ್ಲ.

ಸಂಖ್ಯೆ: ಇಡಿ 269 ಯುಎನ್ಇ 2024

Sudhakar

(ಡಾ. ಎಂ.ಸಿ. ಸುಧಾಕರ್)

ಉನ್ನತ ಶಿಕ್ಷಣ, ಸಚಿವರು